

ಅರುಣ ಪಿ. ಭಟ್ಟ

# ವಾರಭವಿಷ್ಯ: 30.06.2022ರಿಂದ 06.07.2022ವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ವ್ಯಾಪಾರಸ್ಥರಿಗೆ ಪ್ರಗತಿ ಇದೆ. ಶುಭದಿನ 01. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಜತೆಗೆ ಖರ್ಚನ್ನು ಕೂಡ ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ನಿರೀಕ್ಷಿತವಾದ ಫಲಿತಾಂಶ ದೊರೆಯಲಿದೆ. ಶುಭದಿನ 06. ಹನುಮಾನ್ ಚಾಲಿಸ್ ಪಠಿಸಿರಿ.




ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ಇದರಿಂದ ನಿಮಗೆ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಶುಭದಿನ 03. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದ್ಯಾರ್ಥಿಗಳ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ಉದ್ಯೋಗಿಗಳಿಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬೇಡಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿ ಬರಲಿವೆ. ವಾರದ ಅಂತ್ಯದ ವೇಳೆಗೆ ಒಳ್ಳೆಯ ಮೊತ್ತ ನಿಮ್ಮ ಪಾಲಿಗೆ ದೊರೆಯಲಿದೆ. ಶುಭದಿನ 02. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕಾಗಿ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ಧಕ್ಕೆ ಆಗುವ ಸಾಧ್ಯತೆ ಇದೆ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಈ ವಾರದಲ್ಲಿ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಹಣಕಾಸು ಸ್ಥಿತಿ ಉತ್ತಮವಾಗಲಿದೆ. ಶುಭದಿನ 04. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ವ್ಯವಹಾರ ವ್ಯಾಪಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ಆರೋಗ್ಯ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ 02. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶುಭದಿನ 05. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ಶುಭದಿನ 04. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ತಮ್ಮ ಗೌರವ, ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 01. ಕಾಲಭೈರವನ ಸೇವೆ ಮಾಡಿರಿ.




ಜ್ಞಾನ ಹೆಚ್ಚಿಸಿಕೊಳ್ಳಲು ವಾರದ ಆರಂಭದಲ್ಲಿ ಉತ್ತಮ ಅವಕಾಶ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಉದ್ಯೋಗಸ್ಥರಿಗೆ ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ರಾಜಕೀಯವಾಗಿ ವರ್ಚಸ್ಸು ಉಳಿಸಿಕೊಳ್ಳುತ್ತೀರಿ. ಶುಭದಿನ 06. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ 04. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯವಹಾರ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಸುತ್ತಾಡಿ ಬಂದ ನಂತರ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳುತ್ತದೆ. ಶುಭದಿನ 03. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.